ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1100
ಸದಸ್ಯರ ಹೆಸರು	:	ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	15.03.2021
ಉತ್ತರಿಸುವ ಸಚಿವರು	:	ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿನ 1 ರಿಂದ 10ನೇ ತರಗತಿವರೆಗಿನ ಎಷ್ಟು ವಿದ್ಯಾರ್ಥಿಗಳು ಬಿಸಿಯೂಟ ಯೋಜನೆಯ ಫಲಾನುಭವಿಗಳಾಗಿದ್ದಾರೆ ; (ವಿವರ ಒದಗಿಸುವುದು)	ರಾಜ್ಯದಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯವರೆಗೆ ಒಟ್ಟು 56,02,875 ವಿದ್ಯಾರ್ಥಿಗಳು ಬಿಸಿಯೂಟ ಯೋಜನೆಯ ಫಲಾನುಭವಿಗಳಾಗಿದ್ದಾರೆ.
ಆ)	ಪ್ರಸಕ್ತ ಸಾಲಿನಲ್ಲಿ ಮಕ್ಕಳಿಗೆ ಬಿಸಿಯೂಟ ನೀಡಲಾಗುತ್ತಿದೆಯೇ;	2020-21ನೇ ಶೈಕ್ಷಣಿಕ ಶಾಲೆಗಳಲ್ಲಿ ಬಿಸಿಯೂಟವನ್ನು ಸಿದ್ಧಪಡಿಸಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿಲ್ಲ. ಬದಲಿಗೆ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ-2013ರಲ್ಲಿನ ಮಾನದಂಡಗಳಂತೆ ನಿಗದಿತ ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ ಮತ್ತು ಗೋಧಿ) ಮತ್ತು ಅಡುಗೆ ತಯಾರಿಕಾ ವೆಚ್ಚದ ಮೊತ್ತಕ್ಕೆ ಸಮಾನಾಂತರವಾಗಿ ತೊಗರಿಬೇಳೆ, ಖಾದ್ಯತೈಲ ಮತ್ತು ಅಯೋಡಿಕರಿಸಿದ ಉಪ್ಪನ್ನು ಆಹಾರ ಭದ್ರತಾ ಭತ್ಯೆಯ ರೂಪದಲ್ಲಿ ನೀಡಲಾಗುತ್ತಿದೆ.
ಇ)	ಇಲ್ಲವಾದಲ್ಲಿ ಕಾರಣವೇನು; ಎಂದಿನಿಂದ ಪ್ರಾರಂಭಿಸಲಾಗುವುದು;	ಕೋವಿಡ್-19 ವೈರಾಣು ಸೋಂಕಿನ ಪರಿಣಾಮವಾಗಿ ಬದಲಾದ ಸನ್ನಿವೇಷದಿಂದಾಗಿ ಶಾಲೆಗಳನ್ನು ನಿಗದಿತ ಶೈಕ್ಷಣಿಕ ವೇಳಾಪಟ್ಟಿಯಂತೆ ಪೂರ್ಣ ಪ್ರಮಾಣದಲ್ಲಿ ಪ್ರಾರಂಭಿಸಲು ಸಾಧ್ಯವಾಗದ ಕಾರಣ ಹಾಗೂ ಶಾಲೆಗಳಲ್ಲಿ ಬಿಸಿಯೂಟ ನೀಡಿದರೆ ವಿದ್ಯಾರ್ಥಿಗಳು ಗುಂಪಾಗಿ ಸೇರಿ ಸಾಮಾಜಿಕ ಅಂತರ ಕಾಪಾಡಿಕೊಳ್ಳದೇ ಕೋವಿಡ್-19 ವೈರಾಣು ಸೋಂಕು ಹರಡುವ ಸಾಧ್ಯತೆ ಹೆಚ್ಚಾಗಿದ್ದ ಕಾರಣ ಮುನ್ನೆಚ್ಚರಿಕೆ ಕ್ರಮವಾಗಿ ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯಿಂದ ಶಾಲೆಗಳಲ್ಲಿ ಬಿಸಿಯೂಟವನ್ನು ಸಿಧ್ಧಪಡಿಸಿ ನೀಡುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುವುದಿಲ್ಲ. ಶಾಲೆಗಳಲ್ಲಿ ಬಿಸಿಯೂಟವನ್ನು ಪ್ರಾರಂಭಿಸುವ ಅನುಮತಿ ಕೋರಿ ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಾಲಯಕ್ಕೆ ಪತ್ರ ಬರೆಯಲಾಗಿದ್ದು, ಅನುಮತಿ ನಿರೀಕ್ಷಿಸಿದೆ.

ಈ)	ಬಿಸಿಯೂಟ ನೀಡದಿರುವುದರಿಂದ ಮಕ್ಕಳಿಗೆ ಪೋಷಕಾಂಶದ ಕೊರತೆ ಉಂಟಾಗುವ ಸಾಧ್ಯತೆ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಿಸಿಯೂಟ ನೀಡದಿರುವುದರಿಂದ ಮಕ್ಕಳಿಗೆ ಪೋಷಕಾಂಶದ ಕೊರತೆ ಉಂಟಾಗುವುದನ್ನು ತಪ್ಪಿಸಲು ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ-2013ರಲ್ಲಿನ ಮಾನದಂಡಗಳಂತೆ ನಿಗದಿತ ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ ಮತ್ತು ಗೋಧಿ) ಮತ್ತು ಅಡುಗೆ ತಯಾರಿಕಾ ವೆಚ್ಚದ ಮೊತ್ತಕ್ಕೆ ಸಮಾನಾಂತರವಾಗಿ ತೊಗರಿಬೇಳೆ, ಖಾದ್ಯತೈಲ ಮತ್ತು ಅಯೋಡಿಕರಿಸಿದ ಉಪ್ಪನ್ನು, ಆಹಾರ ಭದ್ರತಾ ಭತ್ಯೆಯ ರೂಪದಲ್ಲಿ ನೀಡಿ, ಮಕ್ಕಳಲ್ಲಿ ಪೋಷಕಾಂಶದ ಕೊರತೆಯಾಗದಂತೆ ಕ್ರಮವಹಿಸಲಾಗಿದೆ.
ಉ)	ಹಾಗಿದ್ದಲ್ಲಿ, ಬಿಸಿಯೂಟ ನೀಡುವ ಬಗ್ಗೆ ಸರ್ಕಾರದ ನಿಲುವೇನು?	ಶಾಲೆಗಳಲ್ಲಿ ಬಿಸಿಯೂಟವನ್ನು ನೀಡಲು ಅನುಮತಿ ಕೋರಿ ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಾಲಯಕ್ಕೆ ಪತ್ರ ಬರೆಯಲಾಗಿದ್ದು, ಅನುಮತಿ ನಿರೀಕ್ಷಿಸಿದೆ. ಕೇಂದ್ರ ಸರ್ಕಾರದಿಂದ ಅನುಮತಿ ದೊರೆತ ಕೂಡಲೇ ಪರಿಸ್ಥಿತಿ ಸುಧಾರಿಸಿದ ಬಳಿಕ ಸೂಕ್ತ ಮುನ್ನೆಚ್ಚರಿಕೆಗಳನ್ನು ಕೈಗೊಂಡು ಬಿಸಿಯೂಟನ್ನು ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು.

ಇಪಿ 10 ಎಂಎಂಎಸ್ 2021

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು